Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 21/11/2020 ರ
# ಸಭಾ ನಡವಳಿ

ದಿನಾಂಕ: 21/11/2020 ರಂದು ಬೆಳಿಗ್ಗೆ 11.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ಹಾಜರಿದ್ದವರು:**

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳಿ | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ಗವಿಸಿದ್ದಯ್ಯ | ಕಿರಿಯ ಇಂಜಿನಿಯರ್ ವಿದ್ಯುತ್ ವಿಭಾಗ, ಬಿಬಿಎಂಪಿ |
| 4 | ಶ್ರೀ ಮತಿ ಅನಸೂಯಮ್ಮ | ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಕೆಂಗೇರಿ ಸಂಚಾರಿ ಪೊಲೀಸ್ ಠಾಣೆ |
| 5 | ಶ್ರೀಮತಿ ಮೋನಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ ಸುರೇಶ್ ಎಂ.ಎಸ್ | ಸಹಾಯಕ ಕಾರ್ಯಪಾಲಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ |
| 7 | ಶ್ರೀ ಎಸ್. ರವಿಚಂದ್ರ | ಕಿರಿಯ ಅಭಿಯಂತರರು ಬೆಸ್ಕಾಂ |
| 8 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್. ಎಸ್.ಬಿ. |

Scanned with CamScanner

| | | |
|---|---|---|
| 9 | ಶ್ರೀ ಚಂದ್ರಶೇಖರ್.ಹೆಚ್ | ಸಹಾಯಕ ಅಭಿಯಂತರರು<br>ಬೆಸ್ಕಾಂ |
| 10 | ಶ್ರೀ ಸಾಯಿ ಸಂದೇಶ್ ಬಿ.ಎಸ್. | ಸಹಾಯಕ ಅಭಿಯಂತರರು,<br>ಬೃಹತ್ ನೀರುಗಾಲುವೆ ವಿಭಾಗ |
| 11 | ಶ್ರೀ ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು<br>ಬಿಬಿಎಂಪಿ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **<u>ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ</u>:–** ಅಧ್ಯಕ್ಷರು, ಕೋವಿಡ್–19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್–19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್–19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು.

❖ **<u>ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ</u>:–** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಸಪ್ತಗಿರಿ ಕೌಂಟಿ ಬಡಾವಣೆಯ ನಾಗರೀಕರು ಸಭೆಯಲ್ಲಿ ಮಾತನಾಡಿ ಸದರಿ ಬಡಾವಣೆಯ ಒಳ ಚರಂಡಿ ನೀರು ಸರಾಗವಾಗಿ ಹರಿದು ಹೋಗದೇ ಬಡಾವಣೆಯಲ್ಲೇ ಶೇಖರಣೆಯಾಗುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸದರಿ ಬಡಾವಣೆಗೆ ಈಗಾಗಲೇ ಜಲ ಮಂಡಳಿ ಅಧಿಕಾರಿಯವರೊಂದಿಗೆ ಭೇಟಿನೀಡಿದ್ದು

Scanned with CamScanner

ಸ್ಥಳದಲ್ಲಿನ ಭೌಗೋಳಿಕ ನೀರಿನ ಇಳಿಜಾರಿನ ರೀತಿಯ ಸದರಿ ಒಳ ಚರಂಡಿನೀರು ಪಕ್ಕದಲ್ಲಿರುವ ಕೆರೆಗೆ ಸೇರುವ ಸಂಭವವಿದ್ದು, ಈ ಸಂಬಂಧ ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ ಜಲ ಮಂಡಳಿ ಅಧಿಕಾರಿಗಳು ಸ್ಥಳದಲ್ಲಿ ತಿಳಿಸಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಸದರಿ ವಿಷಯದ ಬಗ್ಗೆ ಬಡಾವಣೆಯ ನಕ್ಷೆಯೊಂದಿಗೆ ಜಲ ಮಂಡಳಿ ಕಛೇರಿಗೆ ಭೇಟಿ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ:-** ವಾರ್ಡ್ ನಂ.198ರ ಕೋಡಿಪಾಳ್ಯದಲ್ಲಿ ರಸ್ತೆಯ ಇಕ್ಕೆಲುಗಳಲ್ಲಿ ಘನತ್ಯಾಜ್ಯ ಹಾಗೂ ಕೋಳಿ ತ್ಯಾಜ್ಯವನ್ನು ಎಸೆದು ಹೋಗುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಸದರಿ ಸ್ಥಳಕ್ಕೆ ಮಾರ್ಷಲ್‌ಗಳನ್ನು ಗಸ್ತು ತಿರುಗಲು ನಿಯೋಜನೆ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

- **ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-** ವಾರ್ಡ್ ನಂ.198ರ ಬಿ.ಜಿಎಸ್. ಸರ್ಕಲ್‌ನಿಂದ ಆಶ್ರಮದ ವರೆಗೆ ಮತ್ತು ಶ್ರೀನಿವಾಸ್‌ಪುರ ಕ್ರಾಸ್‌ನಿಂದ ಎಸ್.ಬಿ.ಐ. ಬ್ಯಾಂಕ್‌ವರೆಗೆ ವಿದ್ಯುತ್ ದೀಪಗಳು ಇರುವುದಿಲ್ಲವೆಂದು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಹೊಸ ವಿದ್ಯುತ್ ದೀಪಗಳನ್ನು ಅಳವಡಿಸಲು ಅವಕಾಶವಿರುವುದಿಲ್ಲವೆಂದು ತಿಳಿಸಿದರು ಹಾಗೂ ಹಾಲಿ ಇರುವ ವಿದ್ಯುತ್ ದೀಪಗಳನ್ನು ದುರಸ್ಥಿಪಡಿಸಲು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಮಾತನಾಡಿ ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸಲು ಸೂಚಿಸಿದರು.

- **ಬೆಂಗಳೂರು ವಿದ್ಯುತ್ ಸರಬರಾಜು ನಿಗಮ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹೆಚ್ಚುವರಿಯಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಲು ಬಡಾವಣೆಯ ನಾಗರಿಕರು ಕೋರಿದರು. ಈ ಸಂಬಂಧ ಬೆಸ್ಕಾಂ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಮತ್ತೊಮ್ಮೆ ಸಭೆಗೆ ತಿಳಿಸಿದರು.

- **ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ:-** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ವೃಷಭಾವತಿ ನದಿಯಲ್ಲಿ ಮಣ್ಣಿನ ರಾಶಿ ಬಿದ್ದಿದ್ದು ಇದರಿಂದಾಗಿ ಮಳೆ ನೀರು ಸರಾಗವಾಗಿ ಹರಿದು ಹೋಗಲು ಅಡಚಣೆಯಾಗಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಬೃಹತ್ ನೀರುಗಾಲುವೆ ಅಧಿಕಾರಿಗಳು ಮಾತನಾಡಿ ತಡೆಗೋಡೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು ಮಣ್ಣಿನ ರಾಶಿಯನ್ನು ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು.

Scanned with CamScanner

❖ **<u>ಅರಣ್ಯ ವಿಭಾಗ, ಬಿಬಿಎಂಪಿ:-</u>** ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಅತಿ ಎತ್ತರದ ಒಣಗಿದ ಮರವು ವಿದ್ಯುತ್ ತಂತಿಯ ಮೇಲೆ ಬಿದ್ದು, ಅನಾಹುತ ಸಂಭವಿಸುವ ಸಾಧ್ಯತೆ ಇದ್ದು ಸದರಿ ಮರವನ್ನು ತೆರವುಗೊಳಿಸುವಂತೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಅರಣ್ಯ ವಿಭಾಗದ ಅಧಿಕಾರಿಗಳು ಎಲ್ಲಾ ಸಭೆಗಳಿಗೆ ಗೈರು ಹಾಜರಾಗಿರುವುದನ್ನು ನೋಡಲ್ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಈ ಸಂಬಂಧ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಯಿತು.

❖ **<u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ:-</u>** (1) ವಾರ್ಡ್ ನಂ.198ರಲ್ಲಿ ಕಾನ್‌ಕಾರ್ಡ್ ಬಡಾವಣೆಯ ಮುಖ್ಯರಸ್ತೆಯ ಕಾಮಗಾರಿ ಪ್ರಗತಿಯಲ್ಲಿದ್ದು, ರಸ್ತೆಯ ನಿರ್ಮಾಣ ತ್ಯಾಜ್ಯವನ್ನು ಅಲ್ಲಲ್ಲೆ ಸುರಿದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು ಹಾಗೂ ರಾಮದೇವರು ರವರ ಮನೆಯ ಮುಂದೆ ರಸ್ತೆ ಹಾಗೂ ಫುಟ್‌ಪಾತ್‌ನ್ನು ನಿರ್ಮಾಣ ಮಾಡಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು. ಈ ಸಂಬಂಧ ರಸ್ತೆ ಮೂಲ ಭೂತ ಸೌಕರ್ಯ ವಿಭಾಗದ ಅಧಿಕಾರಿಗಳು ಮಾತನಾಡಿ ಸ್ಥಳ ಪರಿಶೀಲಿಸಿ ತ್ಯಾಜ್ಯವನ್ನು ತೆರವುಗೊಳಿಸಲು ನಿರ್ದೇಶನ ನೀಡಲಾಗುವುದೆಂದು ಹಾಗೂ ಸದರಿ ಕಾಮಗಾರಿಯನ್ನು ಗುತ್ತಿಗೆ ದಾರರು ಪ್ರಾರಂಭಿಸುವುದಾಗಿ ಸಭೆಗೆ ತಿಳಿಸಿದರು.

(2) ಕೆಂಗೇರಿ ಉತ್ತರಹಳ್ಳಿ ಮುಖ್ಯರಸ್ತೆಯಲ್ಲಿ ಬರುವ ತುರಹಳ್ಳಿ ಕಿರು ಅರಣ್ಯದ ಒಳಗಡೆ ತ್ಯಾಜ್ಯವನ್ನು ಸುರಿಯುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಸದರಿ ಅರಣ್ಯ ಪ್ರದೇಶವು ಕರ್ನಾಟಕ ರಾಜ್ಯ ರಕ್ಷಿತ ಅರಣ್ಯ ಪ್ರದೇಶವಾಗಿದ್ದು, ತ್ಯಾಜ್ಯವನ್ನು ಸುರಿಯುವುದನ್ನು ತಡೆಗಟ್ಟಲು ಕಾಂಪೌಂಡ್‌ಗೋಡೆ ಅಥವಾ ಚೈನ್‌ಲಿಂಕ್ ಫೆನ್ಸಿಂಗ್ ನಿರ್ಮಾಣ ಮಾಡಲು ಅರಣ್ಯ ಇಲಾಖೆಗೆ ಮನವಿಯನ್ನು ಅಲ್ಲಿನ ನಿವಾಸಿಗಳು ಸಲ್ಲಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.

Scanned with CamScanner

5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner